ಖಂಡ1 ಇತ್ಯಾದಿ

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಮಲ್ಲಿಕಾರ್ಜುನ ಎಂ. ಖರ್ಗೆ (ಗೃಹ ಸಚಿವರು) :— ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ವ್ಯವಸ್ಥಿತ ಅಪರಾಧಗಳ ನಿಯಂತ್ರಣ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ, ``2000ರ ಕರ್ನಾಟಕ ವ್ಯವಸ್ಥಿತ ಅಪರಾಧಗಳ ನಿಯಂತ್ರಣ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

9. ಸರ್ಕಾರಿ ನಿರ್ಣಯ

ವಿಷಯ: :— ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ ಬಗ್ಗೆ.

ಅಧ್ಯಕ್ಷರು :— ಸರ್ಕಾರಿ ನಿರ್ಣಯವನ್ನು ಮಂಡಿಸುವುದು.

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹಸಚಿವರು) :— ಮಾನ್ಯ ಅಧ್ಯಕ್ಷರೆ, ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 21) 2ನೇ ಪ್ರಕರಣದ (1)ನೇ ಉಪ ಪ್ರಕರಣದ (ಎ) ಖಂಡದ (iii)ನೇ ಉಪ ಖಂಡದಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ತನ್ನ ಅಧಿಸೂಚನೆ ಸಂಖ್ಯೆ : ಹೆಚ್‌ಡಿ : 240 ಎಸ್‌ಎಸ್‌ಟಿ : 2000, ದಿನಾಂಕ: 12-5-2000ದಲ್ಲಿ, ಕರ್ನಾಟಕ ಪದವಿ ಪೂರ್ವ ಶಿಕ್ಷಣಾಧಿಕಾರಿಗಳ, ಪ್ರಾಂಶುಪಾಲರ, ಉಪನ್ಯಾಸಕರ ಮತ್ತು

ಬೋಧಕೇತರ ಸಿಬ್ಬಂದಿ ಒಕ್ಕೂಟದ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಪದಾಧಿಕಾರಿಗಳ ಸೇವೆಗಳನ್ನು ಸದರಿ ಅಧಿನಿಯಮದ ಉದ್ದೇಶಕ್ಕಾಗಿ ಅತ್ಯಾವಶ್ಯಕ ಸೇವೆಗಳೆಂದು ಘೋಷಿಸಿರುವುದರಿಂದ;

ಸದರಿ ಅಧಿಸೂಚನೆಯನ್ನು ಸದನದಲ್ಲಿ ಮಂಡಿಸಿದ ದಿನಾಂಕದಿಂದ ಅಥವಾ ರಾಜ್ಯ ವಿಧಾನ ಮಂಡಲದ ಮರು ಅಧಿವೇಶನ ದಿನಾಂಕದಿಂದ 60 ದಿನಗಳು ಮುಕ್ತಾಯವಾದ ತರುವಾಯ ರಾಜ್ಯ ವಿಧಾನ ಮಂಡಲದ ಉಭಯ ಸದನಗಳು ಆ ಅವಧಿಯು ಮುಕ್ತಾಯವಾಗುವುದಕ್ಕೆ ಮುಂಚೆ ಸಂಬಂಧಪಟ್ಟ ಅಧಿಸೂಚನೆ ಹೊರಡಿಸಿರುವುದನ್ನು ಅನುಮೋದಿಸಿ ನಿರ್ಣಯವೊಂದನ್ನು ಅಂಗೀಕರಿಸಿದ ಹೊರತು ಕಾರ್ಯಾಚರಣೆಯಲ್ಲಿರುವುದು ನಿಂತು ಹೋಗುವುದರಿಂದ;

ಮತ್ತು ದಿನಾಂಕ 12-5-2000ದಂದು ಸರ್ಕಾರವು ಹೊರಡಿಸಿದ ಸದರಿ ಅಧಿಸೂಚನೆಯನ್ನು ಈ ಸದನವು ಅಂಗೀಕರಿಸುವುದು ಅವಶ್ಯಕವೆಂದು ಈ ವಿಧಾನ ಸಭೆ ಭಾವಿಸಿರುವುದರಿಂದ;

ಈಗ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 21)2ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಅನುಸರಣೆಯಲ್ಲಿ, ಈ ಸದನವು ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 21), 2ನೇ ಪ್ರಕರಣದ (1)ನೇ ಉಪ ಪ್ರಕರಣದ (ಎ) ಖಂಡದ (iii) ನೇ ಉಪ ಖಂಡದ ಉಪಬಂಧಗಳ ಅಡಿಯಲ್ಲಿ ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಹೆಚ್‌ಡಿ 240 ಎಸ್‌ಎಸ್‌ಟಿ : 2000, ದಿನಾಂಕ: 12-5-2000ವನ್ನು ಈ ಸದನವು ಈ ಮೂಲಕ ಅನುಮೋದಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಮಂಡಿಸಲಾಯಿತು, ಪ್ರಸ್ತಾವ ಏನೆಂದರೆ,

"ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 21) 2ನೇ ಪ್ರಕರಣದ (1)ನೇ ಉಪ ಪ್ರಕರಣದ (ಎ) ಖಂಡದ (iii)ನೇ ಉಪ ಖಂಡದಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ತನ್ನ ಅಧಿಸೂಚನೆ ಸಂಖ್ಯೆ ಹೆಚ್‌ಡಿ : 240 ಎಸ್‌ಎಸ್‌ಟಿ : 2000, ದಿನಾಂಕ : 12-5-2000 ದಲ್ಲಿ, ಕರ್ನಾಟಕ ಪದವಿ ಪೂರ್ವ ಶಿಕ್ಷಣಾಧಿಕಾರಿಗಳ, ಪ್ರಾಂಶುಪಾಲರ, ಉಪನ್ಯಾಸಕರ ಮತ್ತು ಬೋಧಕೇತರ ಸಿಬ್ಬಂದಿ ಒಕ್ಕೂಟದ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಪದಾಧಿಕಾರಿಗಳ ಸೇವೆಗಳನ್ನು ಸದರಿ ಅಧಿನಿಯಮದ ಉದ್ದೇಶಕ್ಕಾಗಿ ಅತ್ಯಾವಶ್ಯಕ ಸೇವೆಗಳೆಂದು ಘೋಷಿಸಿರುವುದರಿಂದ;

ಸದರಿ ಅಧಿಸೂಚನೆಯನ್ನು ಸದನದಲ್ಲಿ ಮಂಡಿಸಿದ ದಿನಾಂಕದಿಂದ ಅಥವಾ ರಾಜ್ಯ ವಿಧಾನ ಮಂಡಲದ ಮರು ಅಧಿವೇಶನ ದಿನಾಂಕದಿಂದ 60 ದಿನಗಳು ಮುಕ್ತಾಯವಾದ ತರುವಾಯ ರಾಜ್ಯ ವಿಧಾನ ಮಂಡಲದ ಉಭಯ ಸದನಗಳು ಆ ಅವಧಿಯು ಮುಕ್ತಾಯವಾಗುವುದಕ್ಕೆ ಮುಂಚೆ ಸಂಬಂಧಪಟ್ಟ ಅಧಿಸೂಚನೆ ಹೊರಡಿಸಿರುವುದನ್ನು ಅನುಮೋದಿಸಿ ನಿರ್ಣಯವೊಂದನ್ನು ಅಂಗೀಕರಿಸಿದ ಹೊರತು ಕಾರ್ಯಾಚರಣೆಯಲ್ಲಿರುವುದು ನಿಂತು ಹೋಗುವುದರಿಂದ;

ಮತ್ತು ದಿನಾಂಕ: 12-5-2000ದಂದು ಸರ್ಕಾರವು ಹೊರಡಿಸಿದ ಸದರಿ ಅಧಿಸೂಚನೆಯನ್ನು ಈ ಸದನವು ಅಂಗೀಕರಿಸುವುದು ಅವಶ್ಯಕವೆಂದು ಈ ವಿಧಾನಸಭೆ ಭಾವಿಸಿರುವುದರಿಂದ;

ಈಗ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 21) 2ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಅನುಸರಣೆಯಲ್ಲಿ, ಈ ಸದನವು ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ಅಧಿನಿಯಮ, 1994ರ (1994ರ ಕರ್ನಾಟಕ ಅಧಿನಿಯಮ 21) 2ನೇ ಪ್ರಕರಣದ (1)ನೇ ಉಪ ಪ್ರಕರಣದ (ಎ) ಖಂಡದ (iii) ಉಪ ಖಂಡದ ಉಪಬಂಧಗಳ ಅಡಿಯಲ್ಲಿ ಹೊರಡಿಸಲಾದ ಅಧಿಸೂಚನೆ ಸಂಖ್ಯೆ ಹೆಚ್‌ಡಿ : 240 : ಎಸ್‌ಎಸ್‌ಟಿ : 2000, ದಿನಾಂಕ: 12-5-2000 ವನ್ನು ಈ ಸದನವು ಈ ಮೂಲಕ ಅನುಮೋದಿಸುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

10. ಅಧ್ಯಕ್ಷರ ಅಪ್ಪಣೆ ಮೇರೆಗೆ

(1) ಮಂಡ್ಯದಲ್ಲಿ ಯುವತಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವುದರಿಂದ ಪ್ರಕ್ಷುಬ್ಧ ಪರಿಸ್ಥಿತಿ ಉಂಟಾಗಿರುವುದು.

ಶ್ರೀ ಜಗದೀಶ್ ಶೆಟ್ಟರ್ (ವಿರೋಧಪಕ್ಷದ ನಾಯಕರು) :— ಮಂಡ್ಯದಲ್ಲಿ ಇಂದು ಯುವತಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವ ಸುದ್ದಿ ಬಂದಿರುತ್ತದೆ. ಮಂಡ್ಯದಲ್ಲಿ ಪ್ರಕ್ಷುಬ್ಧ ಪರಿಸ್ಥಿತಿ ಇದೆ ಎಂದು ತಿಳಿದುಬಂದಿದೆ. ದಯವಿಟ್ಟು ಅದರ ಬಗ್ಗೆ ಮಾಹಿತಿ ಪಡೆದು, ಮುಂದಿನ ಕ್ರಮ ಕೈಗೊಳ್ಳಬೇಕು.

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :— ಈಗಾಗಲೇ ಮಾನ್ಯ ಸಿಂಧ್ಯರವರು ಇದರ ಬಗ್ಗೆ ಒಂದು ಚೀಟಿ ಬರೆದು ಕಳುಹಿಸಿದ್ದರು. ನಾನು ಮಾಹಿತಿ ತರಿಸಿಕೊಳ್ಳುವುದಕ್ಕೆ ದೂರವಾಣಿ ಮಾಡಿದ್ದೆ. ಸಂಪೂರ್ಣವಾದ ಮಾಹಿತಿ ನನಗೆ ಇನ್ನೂ